## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 814 (945) |
| ಸದಸ್ಯರ ಹೆಸರು | : | ಶ್ರೀ. ಐವನ್ ಡಿಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17/12/2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | 2023–24 ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳನ್ನು ನಗರಸಭೆ, ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ (ವಿವರ ನೀಡುವುದು); | 2023–24 ನೇ ಸಾಲಿನಲ್ಲಿ ಕೊಡಗು ಜಿಲ್ಲೆಯ ಪೊನ್ನಂಪೇಟೆ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲಾಗಿ ರುತ್ತದೆ. |
| ಆ | ಮೇಲ್ದರ್ಜೆಗೇರಿಸಿದ ಸ್ಥಳೀಯ ಸಂಸ್ಥೆಗಳಿಗೆ ಕಳೆದ 05 ವರ್ಷ ಕಳೆದರೂ ಚುನಾವಣೆ ನಡೆಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೈಗೊಂಡಿರುವ ಕ್ರಮವೇನು; | ವಿವಿಧ ಪ್ರವರ್ಗಗಳಲ್ಲಿ ಹಿಂದುಳಿದ ವರ್ಗಗಳಿಗೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ಕುರಿತು ನಿಗದಿಪಡಿಸಬೇಕಾದ ಮೀಸಲಾತಿಗೆ ಸಂಬಂಧಿಸಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಚಿಸಲಾಗಿದ್ದ ನ್ಯಾಯಮೂರ್ತಿ ಕೆ ಭಕ್ತವತ್ಸಲ ಅಧ್ಯಕ್ಷತೆಯ ಆಯೋಗದ ವರದಿಯನ್ನು ನಿರೀಕ್ಷಿಸಿ, ಮೀಸಲಾತಿ ನಿಗದಿಪಡಿಸುವ ಪ್ರಕ್ರಿಯೆಯನ್ನು ಬಾಕಿ ಇಡಲಾಗಿತ್ತು. ಆಯೋಗವು ಇದುವರೆಗೆ ಅನುಸರಿಸಿರುವಂತೆ ಹಿಂದುಳಿದ ವರ್ಗಗಳಿಗೆ 33% ರ ಮೀಸಲಾತಿ ಪ್ರಮಾಣವನ್ನು ಮುಂದುವರೆಸಬೇಕೆಂದು ಶಿಫಾರಸ್ಸು ಮಾಡಿರುತ್ತದೆ. ಸದರಿ ಆಯೋಗವು ನಗರಾಭಿವೃದ್ಧಿ ಇಲಾಖೆಯ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾ ವಿಭಾಗವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನಕ್ಕೆ ತರುವಂತೆ ಶಿಫಾರಸ್ಸು ಮಾಡಿದ್ದರಿಂದ, ಈ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮುಂದಿನ ಕ್ರಮವನ್ನು ನಿರೀಕ್ಷಿಸಲಾಗಿತ್ತು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ:ಹಿಂವಕ 114 ಬಿಸಿಎ 2022(ಭಾಗ-6); ದಿನಾಂಕ:06/07/2024 ರಲ್ಲಿ ಈ ಕೆಳಕಂಡಂತೆ ಆದೇಶವಾಗಿರುತ್ತದೆ:<br>1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 114 ಬಿಸಿಎ 2022 (ಭಾಗ-1); ದಿನಾಂಕ:04/11/2023 ರಲ್ಲಿ ಜಾರಿಗೊಳಿಸಿರುವ 03 ಶಿಫಾರಸ್ಸುಗಳ ಪೈಕಿ To bring all Urban Local Bodies Election wing under the control of DPAR ಎಂಬ ಶಿಫಾರಸ್ಸನ್ನು ಕೈಬಿಡಲಾಗಿದೆ; |

| | | |
|---|---|---|
| | | 2. ನಗರ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ನಗರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಚುನಾವಣಾ ಘಟಕಗಳನ್ನು ಆಯಾ ಇಲಾಖೆಗಳ ನಿಯಂತ್ರಣದಲ್ಲಿ ಉಳಿಸಿ, ಪ್ರಸ್ತುತ ಚಾಲ್ತಿಯಲ್ಲಿರುವ ವ್ಯವಸ್ಥೆಯನ್ನು ಮುಂದುವರೆಸಲಾಗಿದೆ.<br><br>ಮೇಲೆ ತಿಳಿಸಿರುವ ಕಾರಣದಿಂದಾಗಿ ಹೊಸದಾಗಿ ಮೇಲ್ದರ್ಜೆಗೇರಿಸಲಾದ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್‌ವಾರು ವಿವಿಧ ಪ್ರವರ್ಗಗಳ ಮೀಸಲಾತಿ ನಿಗದಿಪಡಿಸಲು ಕಾಲಾವಕಾಶ ತಗುಲಿರುತ್ತದೆ. ಪ್ರಸ್ತುತ ಈ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್‌ವಾರು ಮೀಸಲಾತಿ ನಿಗದಿಪಡಿಸಲು ಕ್ರಮವಹಿಸಲಾಗುತ್ತಿದೆ. ವಾರ್ಡ್‌ವಾರು ಮೀಸಲಾತಿ ನಿಗದಿಪಡಿಸಿದ ನಂತರ, ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಲಾಗುತ್ತದೆ. |
| ಇ | ಉಡುಪಿ ಜಿಲ್ಲೆಯ ಕಾಪು ತಾಲೂಕಿನ ಶಿರ್ವ ಗ್ರಾಮ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸಲು ಎಲ್ಲಾ ಅರ್ಹತೆ ಇದ್ದರೂ ಈವರೆಗೆ ಮೇಲ್ದರ್ಜೆಗೇರಿಸದೇ ಇರಲು ಕಾರಣವೇನು; ಇಲಾಖೆಗೆ ಇರುವ ತೊಂದರೆಗಳೇನು (ವಿವರ ನೀಡುವುದು)? | ಉಡುಪಿ ಜಿಲ್ಲೆಯ ಕಾಪು ತಾಲೂಕಿನ ಶಿರ್ವ ಗ್ರಾಮ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ ರವರು ನಿಯಮಾನುಸಾರ ಪರಿಶೀಲಿಸಿ, ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವ ಪ್ರಸ್ತಾವನೆಯನ್ನು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಸಲ್ಲಿಸಿದಲ್ಲಿ, ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ:ನಅಇ 75 ಎಲ್‌ಸಿಕ್ಯೂ 2024.**

(ರಹೀಂ ಖಾನ್)
**ಪೌರಾಡಳಿತ ಹಾಗೂ ಹಜ್ ಸಚಿವರು**